# ನೂತನ ಸಂಸತ್ ಭವನಕ್ಕೆ ಅನುಭವ ಮಂಟಪ ನಾಮಕರಣ

## ಕೇಂದ್ರ ಸರ್ಕಾರಕ್ಕೆ ಬೈಲೂರು ನಿಷ್ಕಲಮಂಟಪದ ನಿಜಗುಣಾನಂದ ಶ್ರೀಗಳ ಆಗ್ರಹ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ



ನವದೆಹಲಿಯಲ್ಲಿ ನಿರ್ಮಿಸುತ್ತಿರುವ ನೂತನ ಸಂಸತ್ ಭವನಕ್ಕೆ 'ಅನುಭವ ಮಂಟಪ' ಎಂದು ನಾಮಕರಣ ಮಾಡುವಂತೆ ಬೈಲೂರು ನಿಷ್ಕಲಮಂಟಪದ ಶ್ರೀ ನಿಜಗುಣಾನಂದ ಮಹಾಸ್ವಾಮಿಗಳು ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಇತ್ತೀಚೆಗೆ ಬೆಂಗಳೂರಿಗೆ ಆಗಮಿಸಿದ್ದ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರಿಗೆ ಮೇಲ್ಮನೆಯ ಸಭಾಪತಿ ಬಸವರಾಜ ಹೊರಟ್ಟಿ ಅವರು ಈ ಕುರಿತು ಲಿಖಿತ ಮನವಿ ಸಲ್ಲಿಸಿ ಒತ್ತಾಸಿರುವುದು ಸಮಸ್ತ ಬಸವಾಭಿಮಾನಿಗಳಲ್ಲಿ ಹೆಮ್ಮೆ ಮೂಡಿಸಿದೆ. ಈ ಒತ್ತಾಯಕ್ಕೆ ಎಲ್ಲರೂ ದನಿಗೂಡಿಸಿ ನೂತನ ಸಂಸತ್ ಭವನಕ್ಕೆ 'ಅನುಭವ ಮಂಟಪ' ಎಂದು ನಾಮಕರಣ ಆಗುವಂತೆ ನೋಡಿಕೊಳ್ಳಬೇಕಿದೆ.


ಅನುಭವ ಮಂಟಪ ಎಂಬ ಪ್ರಜಾತಂತ್ರ ವ್ಯವಸ್ಥೆ ಬಸವಾದಿ ಶರಣರು ಜಗತ್ತಿಗೆ ನೀಡಿದ ಮಹಾನ್ ಕೊಡುಗೆ. 12ನೇ ಶತಮಾನದಲ್ಲೇ ಭಾರತದಲ್ಲಿ ಇಂಥದೊಂದು ವ್ಯವಸ್ಥೆ ಜಾರಿಗೆ ಬಂದು ಪ್ರಜಾತಂತ್ರ ವ್ಯವಸ್ಥೆಯಲ್ಲಿ ನಂಬಿಕೆ ಇಟ್ಟ ರಾಷ್ಟ್ರಗಳು ಭಾರತವನ್ನು ಆಶಯದ ಕಂಗಳಿಂದ ನೋಡುವಂತೆ ಮಾಡಿದೆ. ಜಾತಿ, ವರ್ಗ, ಧರ್ಮ, ಲಿಂಗ ತಾರತಮ್ಯವಿಲ್ಲದ ಮತ್ತು ಸರ್ವರ ಅಭಿಪ್ರಾಯಗಳಿಗೆ ಗೌರವ ಸಿಗುವ, ಸಮಸಮಾಜದ ಧ್ಯೇಯ ಹೊಂದಿದ ಪ್ರಜಾಪ್ರಭುತ್ವ ವ್ಯವಸ್ಥೆ ಇದು. ಇಂಥ ಕೊಡುಗೆಗೆ ಕಾರಣವಾದ 'ಅನುಭವ ಮಂಟಪ'ದ ಹೆಸರು ಜಗತ್ತಿನ ಬಹುದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತದ ನೂತನ ಸಂಸತ್ ಭವನಕ್ಕೆ ನಾಮಕರಣ ಮಾಡುವ ಮೂಲಕ ಬಸವಾದಿ ಶರಣರ ಆಶಯ, ಕನಸು, ಮಾನವಪರ ಕಳಕಳಿಯನ್ನು ಗೌರವಿಸಬೇಕಿದೆ ಎಂದು ಶ್ರೀಗಳು ಅಭಿಪ್ರಾಯಪಟ್ಟಿದ್ದಾರೆ. ಈ ಒತ್ತಾಯ ಒಂದು ರೀತಿಯಲ್ಲಿ ಜನಾಗ್ರಹವಾಗಿ ರೂಪಗೊಳ್ಳಬೇಕಿದ್ದು, ಶರಣ ಚಳವಳಿ, ಬಸವತತ್ವ, ಸಮಸಮಾಜದ ಆಶಯದಲ್ಲಿ ನಂಬಿಕೆ ಇಟ್ಟ ಎಲ್ಲರೂ ಆಯಾ ಸಂಸದರು, ಕೇಂದ್ರ ಸಚಿವರಿಗೆ ಈ ಕುರಿತು ಮನವಿ ಸಲ್ಲಿಸಬೇಕು. ರಾಜ್ಯ ಸರ್ಕಾರ ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಅವರಿಗೆ ಪತ್ರ ಬರೆದು ಗಮನ ಸೆಳೆಯುವ ಮೂಲಕ ನೂತನ ಸಂಸತ್ ಭವನಕ್ಕೆ 'ಅನುಭವ ಮಂಟಪ' ಎಂದು ನಾಮಕರಣ ಆಗುವಂತೆ ನೋಡಿಕೊಳ್ಳಬೇಕು ಎಂದು ನಿಜಗುಣಾನಂದ ಶ್ರೀಗಳು ಮನವಿ ಮಾಡಿದ್ದಾರೆ.

ಕನ್ನಡಪ್ರಭ Thu, 30 September 2021
https://kpepaper.asianetnews.com/c/63444523

### ಶಿಕ್ಷಣ ಇಲಾಖೆಯಲ್ಲಿ ವ್ಯವಸ್ಥೆ ಸರಿಯಿಲ್ಲ: ಹೊರಟ್ಟಿ ಆಕ್ರೋಶ

# ಶಿಕ್ಷಕರ ವರ್ಗಾವಣೆ ವಿಳಂಬಕ್ಕೆ ದರಿದ್ರ ಅಧಿಕಾರಿಗಳೇ ಕಾರಣ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ



ಶಿಕ್ಷಣ ಇಲಾಖೆಯ ದರಿದ್ರ ಅಧಿಕಾರಿಗಳಿಂದ ಶಿಕ್ಷಕರ ವರ್ಗಾವಣೆ ಮುಂದೆ ಹೋಗುತ್ತಲೇ ಇದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಿಡಿಕಾರಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಳೆದ 4 ವರ್ಷಗಳಿಂದಲೂ ಶಿಕ್ಷಣ ಇಲಾಖೆಯಲ್ಲಿ ಯಾವುದೇ ವ್ಯವಸ್ಥೆಗಳು ಸರಿಯಿಲ್ಲ. ಹೊಸದಾಗಿ ಬರುವ ಮಂತ್ರಿಗಳಿಗೆ ಅಧಿಕಾರಿಗಳು ಸರಿಯಾದ ಮಾಹಿತಿ ನೀಡುವುದಿಲ್ಲ. ಸುಗ್ರೀವಾಜ್ಞೆ ತರುವ ಮೂಲಕ ಶಿಕ್ಷಕರ ವರ್ಗಾವಣೆ ಮಾಡಬೇಕಾಗಿತ್ತು. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ವರ್ಗಾವಣೆ ವಿಳಂಬವಾಗಿದೆ ಎಂದರು.

3 ತಿಂಗಳು ಬೇಕಂತಲೇ ದಾಟಿಸಿ ಆಮೇಲೆ ವರ್ಗಾವಣೆ ಪ್ರಕ್ರಿಯೆ ನಡೆಸುತ್ತಿದ್ದಾರೆ. ಅ. 4ರಂದು ವರ್ಗಾವಣೆಗೆ ಸಂಬಂಧಿಸಿದಂತೆ ಕೋರ್ಟ್‌ನಲ್ಲಿ ವಿಚಾರಣೆ ಇದೆ. ಇದರ ನಂತರ ವರ್ಗಾವಣೆ ಪ್ರಕ್ರಿಯೆ ನಡೆಯುವ ಸಾಧ್ಯತೆ ಇದೆ. ರಾಜ್ಯದಲ್ಲಿ ಕಡ್ಡಾಯ ವರ್ಗಾವಣೆ ಕಾನೂನಿಲ್ಲ. ಹೀಗಾಗಿ ಹಿಂದೆ ಕಡ್ಡಾಯ ವರ್ಗಾವಣೆಯಾದವರನ್ನು ವಾಪಸ್ ತರಲಿ. ಇದಾದ ನಂತರ ಉಳಿದವರ ವರ್ಗಾವಣೆ ಮಾಡಲಿ. ಶಿಕ್ಷಕರ ವರ್ಗಾವಣೆ ವಿಚಾರದಲ್ಲಿ ಸರ್ಕಾರದ ಪಾತ್ರವಿಲ್ಲ. ಅಧಿಕಾರಿಗಳೇ ಇದೆಲ್ಲಕ್ಕೂ ಮುಖ್ಯ ಕಾರಣ ಎಂದರು.

■ ರಾಜ್ಯದಲ್ಲಿ ಕಡ್ಡಾಯ ವರ್ಗಾವಣೆ ಕಾನೂನಿಲ್ಲ. ಹೀಗಾಗಿ ಹಿಂದೆ ಕಡ್ಡಾಯ ವರ್ಗಾವಣೆಯಾದವರನ್ನು ವಾಪಸ್ ತರಲಿ

ನ್ಯಾಯಾಲಯ ವರ್ಗಾವಣೆಗೆ ತಡೆಯಾಜ್ಞೆ ನೀಡಿತ್ತು. ತಡೆಯಾಜ್ಞೆ ತೆರವಾದ ನಂತರ ಮೂರು ತಿಂಗಳಲ್ಲಿ ಮಾಡಬೇಕಾಗಿತ್ತು. ಆದರೆ ಶಿಕ್ಷಣ ಇಲಾಖೆಯಲ್ಲಿನ ಅಧಿಕಾರಿಗಳ ಮೂರ್ಖತನದಿಂದ ಈ ರೀತಿಯಾಗಿದೆ. ಅಧಿಕಾರಿಗಳು ಉದ್ದೇಶಪೂರ್ವಕವಾಗಿಯೇ ವರ್ಗಾವಣೆ ಮಾಡುತ್ತಿಲ್ಲ. ಮ್ಯೂಚುವಲ್ ವರ್ಗಾವಣೆಗೆ ಯಾರು ಕೇಳುತ್ತಾರೋ ಅವರಿಗೆ ವರ್ಗಾವಣೆ ಕೊಡುವುದು ಉತ್ತಮ ಎಂದರು. ಇನ್ನು ಒಂದನೆಯ ತರಗತಿಯಿಂದ ಶಾಲೆ ಆರಂಭಿಸುವುದಾಗಿ ಸರ್ಕಾರ ಹೇಳುತ್ತಿದೆ. ಆದರೆ 1ನೇ ತರಗತಿಯಿಂದ ಆರಂಭಿಸುವ ಬದಲು ಮೊದಲಿಗೆ 3, 4, 5ನೇ ತರಗತಿಗಳನ್ನು ಆರಂಭಿಸುವುದು ಸೂಕ್ತ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ತಾವು ಮಾತನಾಡುವುದಾಗಿ ತಿಳಿಸಿದರು.

ಈ ಬಾರಿ ವಿಧಾನ ಮಂಡಳ ಅಧಿವೇಶನ ಉತ್ತಮ ರೀತಿಯಲ್ಲಿ ನಡೆದಿದೆ. ಸುದೀರ್ಘ ಚರ್ಚೆ ನಡೆಸಿ ವಿಧೇಯಕಗಳು ಪಾಸು ಮಾಡಲಾಗಿದೆ. ಇದು ಉತ್ತಮ ಬೆಳವಣಿಗೆ ಎಂದರು.

ನಾನು ಸರ್ಕಾರಿ ಬಂಗಲೆಯನ್ನು ಕೇಳಿದ್ದೆ, ಸರ್ಕಾರ ಕೊಟ್ಟಿದೆ. ಅ. 1ರಂದು ಸರ್ಕಾರಿ ಮನೆಗೆ ತೆರಳುತ್ತೇನೆ ಎಂದರು.

ಕನ್ನಡಪ್ರಭ Thu, 30 September 2021
https://kpepaper.asianetnews.com/c/63444